# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1306
ಮಾನ್ಯ ಸದಸ್ಯರ ಹೆಸರು : ಡಾ.ಉಮಾಶ್ರೀ
(ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 17.12.2025
ಉತ್ತರಿಸಬೇಕಾದ ಸಚಿವರು : ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪಶುಸಂಗೋಪನೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು; | ಪಶುಸಂಗೋಪನೆ ಇಲಾಖೆಯ ಎಲ್ಲಾ ವೃಂದದಲ್ಲಿ ಒಟ್ಟು 7484 ಹುದ್ದೆಗಳು ಖಾಲಿ ಇರುತ್ತದೆ.<br><br>ಪ್ರಸ್ತುತ ಇಲಾಖೆಯಲ್ಲಿ ಒಟ್ಟು 1057 ಪಶುವೈದ್ಯರ ಹುದ್ದೆಗಳು ಖಾಲಿ ಇದ್ದು 400 ಪಶುವೈದ್ಯಾಧಿಕಾರಿಗಳ ಹುದ್ದೆಗಳಿಗೆ ಪಶುವೈದ್ಯರನ್ನು ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ ಹಾಗೂ 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದ್ದು ಆರ್ಥಿಕ ಇಲಾಖೆಯ ಪರಿಶೀಲನೆ ಹಂತದಲ್ಲಿರುತ್ತದೆ.<br><br>ಇಲಾಖೆಯಲ್ಲಿ ಪಶುವೈದ್ಯಕೀಯ ಪರೀಕ್ಷಕರ 793 ಹುದ್ದೆಗಳು ಖಾಲಿ ಇದ್ದು, ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಸೇವೆ ಪಡೆಯಲು ಆರ್ಥಿಕ ಇಲಾಖೆಯ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಇಲಾಖೆಯಲ್ಲಿ "ಡಿ" ದರ್ಜೆ 2842 ಹುದ್ದೆಗಳು ಖಾಲಿ ಇದ್ದು, ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ 1000 "ಡಿ" ದರ್ಜೆ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಸೇವೆ ಪಡೆಯಲು ಆರ್ಥಿಕ ಇಲಾಖೆಯ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. |

| | | |
|---|---|---|
| ಆ) | ಈ ಇಲಾಖೆಯಲ್ಲಿ ಪಶು ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಲಾಗಿದೆಯೇ ಹಾಗಿದ್ದಲ್ಲಿ ಎಷ್ಟು ಜನ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆ; ಅದರಲ್ಲಿ ಎಷ್ಟು ಜನ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಇವರಿಗೆ ವೇತನವನ್ನು ನಿಯಮಾನುಸಾರ ಪಾವತಿಸಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಪಾವತಿಸಲಾಗುವುದು; | ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br><br>ಇಲಾಖೆಯಲ್ಲಿ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಯನ್ನು ಆರ್ಥಿಕ ಇಲಾಖೆಯ ಸಹಮತಿಯಂತೆ ಮಾಡಿಕೊಳ್ಳಲಾಗಿದ್ದು 381 ಪಶುವೈದ್ಯಾಧಿಕಾರಿಗಳು ಪ್ರಸ್ತುತ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಗುತ್ತಿಗೆ ಪಶುವೈದ್ಯಾಧಿಕಾರಿಗಳ ವೇತನವನ್ನು ನಿಯಮಾನುಸಾರ ಪಾವತಿಸಲಾಗುತ್ತಿದೆ. |
| ಇ) | ಗುತ್ತಿಗೆ ಆಧಾರದ ಗ್ರೂಪ್ ಎ.ಬಿ.ಸಿ ಮತ್ತು ಡಿ ವರ್ಗದ ನೌಕರರಿಗೆ ನೀಡುತ್ತಿರುವ ವೇತನದ ಮೊತ್ತ ಎಷ್ಟು; 7ನೇ ವೇತನ ಆಯೋಗ ಜಾರಿ ಬಳಿಕ ಇವರ ಮೂಲ ವೇತನ ಹೆಚ್ಚು ಮಾಡಲಾಗಿದೆಯೇ; ಪಶು ವೈದ್ಯ ಕ್ಷೇತ್ರದಲ್ಲಿ ಪಶು ವೈದ್ಯರಲ್ಲದವರು ಇದರ ಲಾಭ ಪಡೆಯುತ್ತಿದ್ದಾರೆಯೇ? | ಗ್ರೂಪ್-ಎ ವೃಂದದ ಅಧಿಕಾರಿಗಳ ಹುದ್ದೆಯಾದ ಪಶುವೈದ್ಯಾಧಿಕಾರಿ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ವೇತನವನ್ನು ರೂ.52640/- ರಂತೆ ನಿಗಧಿಪಡಿಸಲಾಗಿದ್ದು ಅದರಂತೆ ವೇತನವನ್ನು ಪಾವತಿಸಲಾಗುತ್ತಿದೆ.<br><br>7ನೇ ವೇತನ ಆಯೋಗದ ವೇತನ ಪರಿಷ್ಕರಣೆಯಲ್ಲಿ ಪಶುವೈದ್ಯಾಧಿಕಾರಿಗಳಿಗೆ ನಿಗಧಿಪಡಿಸಿದ ಮೂಲ ವೇತನಕ್ಕೆ ಸಂಬಂಧಿಸಿದಂತೆ ಗುತ್ತಿಗೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯರಿಗೆ 7ನೇ ವೇತನ ಆಯೋಗದಂತೆ ವೇತನ ಪಾವತಿಸುವ ಬಗ್ಗೆ ಆರ್ಥಿಕ ಇಲಾಖೆಯ ಪರಿಶೀಲನಾ ಹಂತದಲ್ಲಿದೆ.<br><br>ಇಲಾಖೆಯಲ್ಲಿ ಪಶುವೈದ್ಯರಲ್ಲದವರು ಇದರ ಲಾಭ ಪಡೆಯುತ್ತಿಲ್ಲ. |

**ಪಸಂಮೀ 277 ಸಲೆವಿ 2025**

(ಕೆ. ವೆಂಕಟೇಶ್)

ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು